# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 922

ಸದಸ್ಯರ ಹೆಸರು : ಶ್ರೀ ಗೋವಿಂದರಾಜು, (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 21-12-2021

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ (ಐ.ಸಿ.ಡಿ.ಸಿ)ಯ ಉದ್ದೇಶವೇನು ; | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಉದ್ದೇಶಗಳು ಈ ಕೆಳಕಂಡಂತಿವೆ.<br>• 0-6 ವರ್ಷದ ಮಕ್ಕಳ ಆರೋಗ್ಯ, ಪೌಷ್ಠಿಕ ಮಟ್ಟವನ್ನು ವೃದ್ಧಿಸುವುದು.<br>• ಮಗುವಿನ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವುದು.<br>• ಮಕ್ಕಳಲ್ಲಿ ಸಾವು, ಅನಾರೋಗ್ಯ, ಅಪೌಷ್ಠಿಕತೆ ಮತ್ತು ಶಾಲಾ ಬಿಡುವಿಕೆಯನ್ನು ಕಡಿಮೆಗೊಳಿಸುವುದು.<br>• ಶಿಶು ಅಭಿವೃದ್ಧಿ ಕಾರ್ಯಕ್ರಮವನ್ನು ಉತ್ತಮಗೊಳಿಸುವ ಕಾರ್ಯನೀತಿ ಮತ್ತು ಅನುಷ್ಠಾನಗೊಳಿಸುವ ದಿಸೆಯಲ್ಲಿ ಪರಿಣಾಮಕಾರಿಯಾದ ಸಮನ್ವಯತೆಯನ್ನು ಸಾಧಿಸುವುದು.<br>• ಆರೋಗ್ಯ ಮತ್ತು ಪೌಷ್ಠಿಕತೆಯ ಶಿಕ್ಷಣವನ್ನು ನೀಡುವುದರ ಮೂಲಕ ತಾಯಂದಿರಲ್ಲಿ ತಮ್ಮ ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕತೆಯ ಅಗತ್ಯಗಳನ್ನು ಸರಿಯಾಗಿ ನೋಡಿಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸುವುದು. |
| ಆ. | ಅಂಗನವಾಡಿಗೆ ಬರುವ ಮಕ್ಕಳಿಗೆ ಯಾವ ಯಾವ ಸೌಲಭ್ಯಗಳನ್ನು ಸರ್ಕಾರದಿಂದ ಒದಗಿಸಲಾಗಿದೆ ; | **<u>ಪೂರಕ ಪೌಷ್ಠಿಕ ಆಹಾರ :</u>**<br>ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿ ದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br>• ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ. |

- 6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

- 3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 .ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

- ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

- ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ.

**<u>ಜುಚ್ಚುಮದ್ದು ಕಾರ್ಯಕ್ರಮ :</u>**

6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.

**<u>ಆರೋಗ್ಯ ತಪಾಸಣೆ :</u>**

ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.

**<u>ಮಾಹಿತಿ ಸೇವೆ :</u>**

ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಠಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ.

<table>
<tr><td></td><td></td><td><u>ಶಾಲಾಪೂರ್ವ ಶಿಕ್ಷಣ :</u><br>ಅಂಗನವಾಡಿ ಕೇಂದ್ರಕ್ಕೆ 3 ರಿಂದ 6 ವರ್ಷದ ಮಕ್ಕಳು ಮಾತ್ರ ಪ್ರತೀ ದಿನ ಬೆಳಿಗ್ಗೆ 9.30 ರಿಂದ ಸಂಜೆ 4.00 ಗಂಟೆಯವರೆಗೆ ಹಾಜರಾಗುತ್ತಾರೆ. ಈ ಮಕ್ಕಳಿಗೆ ಅಂಗನವಾಡಿ ಕಾರ್ಯಕರ್ತೆಯು ರೂಢಿಗತವಲ್ಲದ ಶಾಲಾಪೂರ್ವ ಶಿಕ್ಷಣವನ್ನು ನೀಡುತ್ತಾರೆ.</td></tr>
<tr><td>ಇ.</td><td>ಈ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದ ಅನುದಾನವೆಷ್ಟು; ಹಾಗೂ ರಾಜ್ಯ ಸರ್ಕಾರದ ಅನುದಾನವೆಷ್ಟು; (ವಿವರಗಳನ್ನು ಒದಗಿಸುವುದು)</td><td>ಸದರಿ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದಿಂದ ಶೇ.50 ಮತ್ತು ರಾಜ್ಯ ಸರ್ಕಾರದಿಂದ ಶೇ.50 ರಷ್ಟು ಅನುದಾನವನ್ನು ಒದಗಿಸಲಾಗುತ್ತಿದೆ.<br><br>2021-22ನೇ ಸಾಲಿನ ಅನುದಾನದ ವಿವರ ಈ ಕೆಳಗಿನಂತಿದೆ.<br><br>(ರೂ.ಲಕ್ಷಗಳಲ್ಲಿ)
<table>
<tr><th>ಕೇಂದ್ರ ಸರ್ಕಾರದಿಂದ ನಿಗದಿಪಡಿಸಿದ ಅನುದಾನ</th><th>ಬಿಡುಗಡೆ ಮಾಡಿದ ಅನುದಾನ (ಅಕ್ಟೋಬರ್-2021ರ ಅಂತ್ಯಕ್ಕೆ)</th><th>ರಾಜ್ಯ ಸರ್ಕಾರದಿಂದ ನಿಗದಿಪಡಿಸಿದ ಅನುದಾನ</th><th>ಬಿಡುಗಡೆ ಮಾಡಿದ ಅನುದಾನ (ಅಕ್ಟೋಬರ್-2021ರ ಅಂತ್ಯಕ್ಕೆ)</th></tr>
<tr><td>59944.17</td><td>26825.01</td><td>137375.03</td><td>121200.66</td></tr>
</table></td></tr>
<tr><td>ಈ.</td><td>ಮಕ್ಕಳಿಗೆ ವಾರದಲ್ಲಿ ನೀಡಲಾಗುವ ತಿಂಡಿಗಳಾವುವು; (ವಿವರ ಒದಗಿಸುವುದು).</td><td>ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಮೇಲ್ವಿಚಾರಣಾ ಸಮಿತಿಯು ಜಿಲ್ಲೆಗಳಲ್ಲಿ ಮೆನುವನ್ನು ನಿಗಧಿಪಡಿಸುತ್ತದೆ.<br><br>ಮಕ್ಕಳಿಗೆ ವಾರದಲ್ಲಿ ನೀಡಲಾಗುವ ಆಹಾರ ಪದಾರ್ಥಗಳ ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ.</td></tr>
<tr><td>ಉ.</td><td>ಮಹಿಳಾ ಪೂರಕ ಪೌಷ್ಠಿಕ ಕೇಂದ್ರ (ಎಂ.ಎಸ್.ಪಿ.ಟಿ.ಸಿ)ಗಳ ಮೂಲಕ ವಿತರಿಸುವ ಗೋಧಿ, ರವೆ, ಅಕ್ಕಿ, ಹೆಸರುಕಾಳು ಹಾಗೂ ಇನ್ನಿತರ ಪದಾರ್ಥಗಳನ್ನು ಮಾಸ್ಟರ್ ಬ್ಯಾಗ್‌ನಲ್ಲಿ ಹಾಕಿ ಅಂಗನವಾಡಿಗೆ ವಿತರಿಸುವ ಪದ್ಧತಿ ಇದೆಯೇ;</td><td>ಮಾಸ್ಟರ್ ಬ್ಯಾಗ್‌ಗೆ ತಗಲುವ ವೆಚ್ಚ ಹೆಚ್ಚಾಗುವುದರಿಂದ ಫಲಾನುಭವಿಗಳಿಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ನಿಗದಿತ ಪ್ರಮಾಣದಲ್ಲಿ ಪೂರಕ ಪೌಷ್ಠಿಕ ಆಹಾರವನ್ನು ವಿತರಿಸಲು ಕಷ್ಟಸಾಧ್ಯವಾಗುವುದರಿಂದ ಮಾಸ್ಟರ್ ಬ್ಯಾಗ್‌ನಲ್ಲಿ ಆಹಾರ ಪದಾರ್ಥಗಳನ್ನು ವಿತರಿಸುತ್ತಿರುವುದಿಲ್ಲ.</td></tr>
<tr><td>ಊ.</td><td>ಹಾಗಿದ್ದಲ್ಲಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಸ್ತುತ ಬ್ಯಾಗಿನಲ್ಲಿ ನೀಡುವ ಪದ್ಧತಿ ಇದೆಯೇ; (ಜಿಲ್ಲಾವಾರು ವಿವರ ನೀಡುವುದು)</td><td>ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಸ್ತುತ ಬ್ಯಾಗಿನಲ್ಲಿ ನೀಡುವ ಪದ್ಧತಿ ಇರುವುದಿಲ್ಲ.</td></tr>
<tr><td>ಋ.</td><td>ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆ ಇದೆಯೇ; ಇದ್ದಲ್ಲಿ, ಔಷಧೋಪಚಾರ ಹಾಗೂ ಚಿಕಿತ್ಸೆಗೆ ಪ್ರತಿ ಮಗುವಿಗೆ ವರ್ಷಕ್ಕೆ ಎಷ್ಟು ಹಣವನ್ನು ನಿಗದಿ ಪಡಿಸಲಾಗಿದೆ?</td><td>2021-22ನೇ ಸಾಲಿನಿಂದ ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆ.</td></tr>
</table>

**ಸಂ: ಮಮಇ 322 ಐಸಿಡಿ 2021**

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 922 ಕ್ಕೆ ಒದಗಿಸಲಾದ ಅನುಬಂಧ**

**ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ನೀಡುತ್ತಿರುವ ಆಹಾರ**

1) **06 ತಿಂಗಳಿಂದ 3 ವರ್ಷದ ಮಕ್ಕಳಿಗೆ:** (ಮನೆಗೆ ವಿತರಿಸಲು) **: ಘಟಕ ವೆಚ್ಚ ರೂ.8/-**

| | |
|---|---|
| ನ್ಯೂಟ್ರಿಮಿಕ್ಸ್ (ಪುಷ್ಠಿ) | ಹುರಿದ ಅಕ್ಕಿ / ಗೋಧಿ / ಹೆಸರುಕಾಳು / ಹುರಿಗಡಲೆ/ ಕಡಲೆಕಾಯಿ ಬೀಜ / ಸಕ್ಕರೆ |
| 150 ಎಂ.ಎಲ್. ಹಾಲು | ಹಾಲಿನ ಪುಡಿ, ಸಕ್ಕರೆ |

2) **3 ರಿಂದ 6 ವರ್ಷದ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ನೀಡುವ ಆಹಾರದ ಪ್ರಮಾಣ ಘಟಕ ವೆಚ್ಚ ರೂ.8/-**

| ಕ್ರ.ಸಂ | **ಆಹಾರಗಳ ಹೆಸರು** | ಷರಾ |
|---|---|---|
| 1 | 150 ಎಂ.ಎಲ್. ಹಾಲು | ಹಾಲಿನ ಪುಡಿ, ಸಕ್ಕರೆ |
| 2 | ಮೊಳಕೆಭರಿಸಿದ ಕಾಳು / ಶೇಂಗಾ ಬೀಜದ ಚಿಕ್ಕಿ | ಹೆಸರುಕಾಳು / ಶೇಂಗಾಬೀಜ ಮತ್ತು ಬೆಲ್ಲ |
| 3 | ಅನ್ನ ಸಾಂಬಾರ್ / ಚಿತ್ರಾನ್ನ / ಗೋಧಿ ರವೆ ಪಾಯಸ | ಅಕ್ಕಿ, ತೊಗರಿಬೇಳೆ, ಸಾಂಬಾರ್ ಪದಾರ್ಥ ಅಕ್ಕಿ, ಸಾಸುವೆ, ಎಣ್ಣೆ / ಗೋಧಿರವೆ, ಬೆಲ್ಲ |
| 4 | ಮೊಟ್ಟೆ | ವಾರದಲ್ಲಿ 2 ದಿನ |

- **6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ** ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

- **3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ** ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

**ಷರಾ:** ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಅಂಗನವಾಡಿ ಕೇಂದ್ರಗಳು ಮುಚ್ಚಿರುವುದರಿಂದ ಫಲಾನುಭವಿಗಳ ಮನೆ ಬಾಗಿಲಿಗೆ ಕಚ್ಚಾ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲಾಗುತ್ತಿದೆ.